## ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ

ಸಿ.ಸಿ.39/2024

ಸಾಕ್ಷಿದಾರರ ಹೇಳಿಕೆಃ

| | | | | |
|---|---|---|---|---|
| ಹೆಸರು | : | ಅಮಿತ್ | CW: 2 | PW: 2 |
| ತಂದೆಯ ಹೆಸರು | : | ಮಂಜುನಾಥ ಸ್ವಾಮಿ | | |
| ವಯಸ್ಸು | : | 37 | | |
| ವೃತ್ತಿ | : | ಆಟೋ ಡ್ರೈವರ್ | | |
| ವಾಸಸ್ಥಳ | : | ನ್ಯಾಮತಿ | | |

ದಿನಾಂಕಃ 02.12.2025 ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಭೋಧಿಸಲಾಯಿತು.

ಮುಖ್ಯವಿಚಾರಣೆಃ – ಮಾನ್ಯ ಸ.ಸ.ಅ.ರವರಿಂದಃ–

ಆರೋಪಿ ಮತ್ತು ಚಾಸಾ 3 ರವರು ಗೊತ್ತಿಲ್ಲ. ಈ ಪ್ರಕರಣದ ಬಗ್ಗೆ ನನಗೆ ಏನು ಗೊತ್ತಿಲ್ಲ. ನನ್ನ ಸಮಕ್ಷಮ ಪೋಲೀಸರು ಯಾವುದೇ ಪಂಚನಾಮೆ ಜರುಗಿಸಿಲ್ಲ. ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿಲ್ಲ. ಈ ಪ್ರಕರಣದ ಸಂಬಂಧ ನಾನು ಪೊಲೀಸರಿಗೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ. ನ್ಯಾಯಾಲಯದ ಮು. ಮಾಲನ್ನು ನಾನು ಈ ಹಿಂದೆ ನೋಡಿಲ್ಲ.

ಪೋಲೀಸರ ಕೋರಿಕೆಯ ಮೇರೆಗೆ ಕೆಲವು ದಾಖಲೆಗಳಿಗೆ ನಾನು ಸಹಿಯನ್ನು ಮಾಡಿರುತ್ತೇನೆ ಆದರೆ ಅದರಲ್ಲಿ ಏನು ಬರೆದಿದೆ ಎನ್ನುವ ವಿಚಾರ ನನಗೆ ಗೊತ್ತಿಲ್ಲ. ಸಾಕ್ಷಿಯು ನಿಪಿ 2 ಛಾಯಾಚಿತ್ರದಲ್ಲಿ ತಾನು ಇರುವ ಬಗ್ಗೆ ನೋಡಿ ಗುರುತಿಸಿದ್ದು ಅದನ್ನು ಯಾವ ಕಾರಣಕ್ಕೆ ತೆಗೆದಿರುತ್ತಾರೆ ಎಂದು ಗೊತ್ತಿಲ್ಲ ಎಂದು ನುಡಿಯುತ್ತಾರೆ. ಸಾಕ್ಷಿಯು ಪಂಚನಾಮೆಯನ್ನು ಸಾಕ್ಷಿ

ನೋಡಿ ಗುರುತಿಸಿದ್ದು ಪಂಚನಾಮೆಯನ್ನು ನಿಪಿ 3 ಎಂದು, ಸಾಕ್ಷಿಯ ಸಹಿಯನ್ನು ನಿಪಿ 3(ಎ) ಎಂದು ಗುರುತಿಸಲಾಯಿತು.

(ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ ರವರು ಅನುಮತಿ ಕೋರಿದ್ದಾರೆ. ಸೂಕ್ತ ಕಾರಣ ನೀಡಿದ ಮೇರೆಗೆ ಅನುಮತಿ ನೀಡಲಾಗಿದೆ.)

<u>ಪಾಟೀ ಸವಾಲುಃ ಮಾನ್ಯ ಸ.ಸ.ಅ.ರವರಿಂದಃ-</u>

ದಿಃ 05.07.2023 ರಂದು ಸಾಲಬಾಳು ಕ್ರಾಸ್ ಬಳಿ ಹೊನ್ನಾಳಿ ಶಿವಮೊಗ್ಗದ ರಸ್ತೆಯ ಬಳಿ ಇರುವ ಆರೋಪಿಯ ಪೆಟ್ಟಿಗೆ ಅಂಗಡಿ ಮುಂಭಾಗದ ಸಾರ್ವಜನಿಕದ ಸ್ಥಳದಲ್ಲಿ ಮಧ್ಯಾಹ್ನ 2 ರಿಂದ 2.45 ರವರೆಗೆ ನನ್ನ ಹಾಗೂ ಚಾಸಾ 3 ರವರ ಸಮಕ್ಷಮದಲ್ಲಿ ಪ್ರೂಲೀಸರು ನಿಪಿ 3 ರಂತೆ ಪಂಚನಾಮೆ ಜರುಗಿಸಿ, ನಿಪಿ 2 ರಂತೆ ಫೋಟೋ ತೆಗೆದು, ಮು ಮಾ 1 ಮತ್ತು 2 ನ್ನು ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಈ ಸಂಬಂಧ ನಾನು ಪೊಲೀಸರಿಗೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಒಪ್ಪದ ಹೇಳಿಕೆಯನ್ನು ನಿಪಿ 4 ಎಂದು ಗುರುತಿಸಲಾಯಿತು.

ಎಲ್ಲಾ ವಿಚಾರಗಳು ಗೊತ್ತಿದ್ದರೂ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆಂದರೆ ಸರಿಯಲ್ಲ.

<u>ಪಾಟೀ ಸವಾಲುಃ- ಆರೋಪಿ ಪರ ವಕೀಲರಿಂದಃ-</u>

ಆರೋಪಿ ಪರ ವಕೀಲರು ಪಾಟೀ ಸವಾಲು ಏನು ಇಲ್ಲ ಎಂದು ತಿಳಿಸಿದ ಮೇರೆಗೆ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರುವಿಚಾರಣೆ ಇಲ್ಲ.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.